

ಅರುಣ ಪಿ. ಭಟ್ಟ

# ವಾರಭವಿಷ್ಯ: 20.04.2023ರಿಂದ 26.04.2023ವರೆಗೆ



**ಮೇಷ**

ಕಾನೂನು ವ್ಯಾಜ್ಯಗಳಿದ್ದಲ್ಲಿ ಅದನ್ನು ನಿವಾರಿಸಿಕೊಳ್ಳಲು ಸೂಕ್ತ ವೇದಿಕೆ ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ಸರ್ಕಾರಿ ಕೆಲಸ ಕಾರ್ಯಗಳಲ್ಲಿ ಪ್ರಗತಿ ಇದೆ. ಪ್ರೀತಿಪಾತ್ರರ ಜತೆಗೆ ಬಾಂಧವ್ಯ ಮತ್ತಷ್ಟು ಗಟ್ಟಿಯಾಗಲಿದೆ. ಸಹೋದ್ಯೋಗಿಗಳ ಜತೆ ಉತ್ತಮ ಬಾಂಧವ್ಯ ಇರುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಏರಿಳಿತಗಳಿರುತ್ತವೆ. ಶುಭದಿನ 21. ಸೌಂದರ್ಯ ಲಹರಿ ಪಠಿಸಿರಿ.



**ವೃಷಭ**

ವಾರದ ಶುರುವಿನಲ್ಲಿ ವೈವಾಹಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಜತೆಗೆ ಈ ಹಿಂದೆ ಮನಸ್ತಾಪ ಇದ್ದಲ್ಲಿ ನಿವಾರಣೆ ಆಗುತ್ತದೆ. ನೀವು ಕೆಲಸ ಮಾಡುವ ಸಂಸ್ಥೆಯ ವ್ಯವಹಾರಗಳನ್ನು ಮುನ್ನಡೆಸುವುದರಲ್ಲಿ ಮಹತ್ವದ ಪಾತ್ರವನ್ನು ವಹಿಸಲಿದ್ದೀರಿ. ಪ್ರೀತಿಪಾತ್ರರ ಜತೆ ಬಾಂಧವ್ಯ ಗಟ್ಟಿಯಾಗಲಿದೆ. ವಾರದ ಮೊದಲ ಭಾಗದಲ್ಲಿ ಆರೋಗ್ಯ ಉತ್ತಮವಾಗಿರುತ್ತದೆ. ಶುಭದಿನ 25. ಹನುಮಾನ್ ಚಾಲೀಸ್ ಪಠಿಸಿರಿ.



**ಮಿಥುನ**

ಶೈಕ್ಷಣಿಕ ಹಾಗೂ ವೃತ್ತಿರಂಗದಲ್ಲಿ ಹಲವು ಮಹತ್ತರವಾದ ಅವಕಾಶಗಳು ದೊರಕುತ್ತವೆ. ಅತ್ಯುತ್ತಮ ಫಲಿತಾಂಶ ದೊರೆಯಲಿದೆ. ಆದಾಯವು ಸಮಾಧಾನಕರ ಮಟ್ಟಕ್ಕೆ ಏರಿಕೆ ಆಗಲಿದೆ. ಆರೋಗ್ಯ ಉತ್ತಮವಾಗಿರಲಿದೆ. ಈ ಹಿಂದಿನ ಕೌಟುಂಬಿಕ ಸಮಸ್ಯೆಗಳನ್ನು ತಾಳ್ಮೆಯಿಂದ ಬಗೆಹರಿಸಿಕೊಳ್ಳಲಿದ್ದೀರಿ. ವೈವಾಹಿಕ ಜೀವನ ಸಂತುಷ್ಟವಾಗಿ ಇರಲಿದೆ. ಶುಭದಿನ 23. ಚಂಡಿ ಪಾರಾಯಣ ಮಾಡಿರಿ.



**ಕಟಕ**

ವ್ಯಾಪಾರದಲ್ಲಿ ಅತ್ಯುತ್ತಮ ಫಲಿತಾಂಶ ಪಡೆಯಲಿದ್ದೀರಿ. ಕಚೇರಿಯಲ್ಲಿ ಬದಲಾವಣೆ ತರುವುದಕ್ಕೆ ಹಣ ಖರ್ಚು ಮಾಡಲಿದ್ದೀರಿ. ಆರೋಗ್ಯ ಮತ್ತು ದೈಹಿಕ ದೃಢತೆ ಚೆನ್ನಾಗಿರಲಿದೆ. ವೃತ್ತಿಪರ ಕೌಶಲವನ್ನು ಹೆಚ್ಚಿಸಿಕೊಳ್ಳಲು ಅವಕಾಶಗಳು ದೊರೆಯಲಿವೆ. ಆದರೆ, ಅದಕ್ಕೆ ನೀವು ಹೆಚ್ಚಿನ ಶ್ರಮ ಹಾಕಬೇಕಾಗುತ್ತದೆ. ನಿಮ್ಮ ಸಂಗಾತಿ ಮನವೊಲಿಸಲು ಸಫಲರಾಗುತ್ತೀರಿ. ಶುಭದಿನ 22. ಶ್ರೀರಾಮ ರಕ್ಷಾ ಸ್ತೋತ್ರ ಪಠಿಸಿರಿ.



**ಸಿಂಹ**

ಆರೋಗ್ಯ ಹಾಗೂ ದೈಹಿಕ ದಾರ್ಢ್ಯತೆ ಉತ್ತಮವಾಗಿ ಇರಿಸಿಕೊಳ್ಳುವ ನಿಟ್ಟಿನಲ್ಲಿ ಪ್ರಯತ್ನಗಳನ್ನು ಆರಂಭಿಸಲಿದ್ದೀರಿ. ಹಲವು ಸಕಾರಾತ್ಮಕ ಬದಲಾವಣೆಗೆ ಸಾಕ್ಷಿಯಾಗಲಿದ್ದೀರಿ. ನಿರ್ಮಾಣ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುವವರಿಗೆ ಏಳ್ಗೆ ಇದೆ. ದಾನ ಧರ್ಮ ಕಾರ್ಯಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಉದ್ಯೋಗಕ್ಕಾಗಿ ಹುಡುಕುವವರಿಗೆ ಯಶಸ್ಸು ದೊರೆಯಲಿದೆ. ಶುಭದಿನ 26. ಗಣಪತಿಸುಬ್ರಮಣ್ಯ ಜಪ ಮಾಡಿರಿ.



**ಕನ್ಯಾ**

ವಾರದ ಶುರುವಿನಿಂದಲೇ ಹತ್ತಿರದ ಸಂಬಂಧಿಗಳೊಂದಿಗೆ ಬಾಂಧವ್ಯ ಗಟ್ಟಿಯಾಗಲಿದೆ. ಕುಟುಂಬದಲ್ಲಿ ಸಂತಸದ ವಾತಾವರಣ ಇರಲಿದೆ. ವ್ಯವಹಾರಗಳಲ್ಲಿ ಲಾಭ ದೊರೆಯುವ ಅವಕಾಶಗಳಿವೆ. ವಾರದ ಮಧ್ಯ ಭಾಗದಲ್ಲಿ ಅದೃಷ್ಟದ ಬೆಂಬಲ ಇರುತ್ತದೆ. ದೇವತಾ ಆರಾಧನೆಗಾಗಿ ಹೆಚ್ಚಿನ ಸಮಯವನ್ನು ಮೀಸಲಿಡಲಿದ್ದೀರಿ. ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ. ಶುಭದಿನ 20. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.



**ತುಲಾ**

ವ್ಯಾಪಾರ ಉದ್ಯಮ ವಿಸ್ತರಣೆಗೆ ಕೈಗೊಂಡ ಪ್ರಯತ್ನಗಳಲ್ಲಿ ಯಶಸ್ವಿ ಆಗಲಿದ್ದೀರಿ. ಆರೋಗ್ಯ ಉತ್ತಮವಾಗಿರುತ್ತದೆ. ಈ ಹಿಂದಿನ ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ನಿವಾರಣೆ ಆಗಲಿದೆ. ವಾರದ ದ್ವಿತೀಯಾರ್ಧದಲ್ಲಿ ಹಲವು ಕೆಲಸಗಳನ್ನು ಅಂದುಕೊಂಡಂತೆಯೇ ಪೂರ್ಣಗೊಳಿಸಲು ತಂತ್ರಗಳನ್ನು ರೂಪಿಸಲಿದ್ದೀರಿ. ಮಾನಸಿಕ ನೆಮ್ಮದಿ ದೊರೆಯಲಿದೆ. ಶುಭದಿನ 22. ಮಹಾಗಣಪತಿಗೆ ದೂರ್ವಾರ್ಚನೆ ಮಾಡಿರಿ.



**ವೃಶ್ಚಿಕ**

ವಿದೇಶಗಳಲ್ಲಿ ಕಾರ್ಯ ನಿರ್ವಹಿಸಲು ಬಯಸಿದವರಿಗೆ ಶುಭ ವಾರ್ತೆ. ಆರ್ಥಿಕ ಹೂಡಿಕೆಗಳಿಗೆ ಉತ್ತಮ ಫಲಿತಾಂಶ ದೊರೆಯಲಿದೆ. ನೀವು ಪ್ರಾಮಾಣಿಕ ಪ್ರಯತ್ನ ಮಾಡಿದರೆ ಸಾಕು, ಉತ್ತಮ ಫಲಿತಾಂಶ ದೊರೆಯುತ್ತದೆ. ನಿಮ್ಮ ಪ್ರತಿಸ್ಪರ್ಧಿಗಳ ವಿರುದ್ಧ ಕೈ ಮೇಲಾಗಲಿದೆ. ಆದರೆ ಆರೋಗ್ಯ ಮತ್ತು ಪ್ರೀತಿ ಪ್ರೇಮದ ವಿಚಾರದಲ್ಲಿ ಏರಿಳಿತಗಳನ್ನು ಕಾಣಲಿದ್ದೀರಿ. ಶುಭದಿನ 26. ಚಂಡಿ ಪಾರಾಯಣ ಮಾಡಿರಿ.



**ಧನಸ್ಸು**

ಕೌಟುಂಬಿಕ ಜೀವನ ಚೆನ್ನಾಗಿ ಇರಬೇಕು ಎಂಬ ಕಾರಣಕ್ಕೆ ನೀವು ಹೆಚ್ಚು ಕೆಲಸ ಮಾಡಲಿದ್ದೀರಿ. ಆರ್ಥಿಕ ಸ್ಥಿತಿ ಉತ್ತಮವಾಗಿ ಇರಲಿದೆ. ಸಂಗಾತಿ ಜತೆಗಿನ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ವ್ಯಾಪಾರ ವ್ಯವಹಾರಗಳು ಇದ್ದಲ್ಲಿ ಏಳ್ಗೆ ಕಾಣಿಸುವ ಸೂಚನೆ ದೊರೆಯುತ್ತದೆ. ಆರೋಗ್ಯ ಸ್ಥಿತಿ ಅಷ್ಟೇನೂ ಉತ್ತಮವಾಗಿ ಇರಲಿಕ್ಕಿಲ್ಲ. ಸಕಾರಾತ್ಮಕ ಬೆಳವಣಿಗೆ ಆಗಲಿದೆ. ಶುಭದಿನ 24. ರಾಘವೇಂದ್ರ ಸ್ವಾಮಿಗಳ ಭಜನೆ ಮಾಡಿರಿ.



**ಮಕರ**

ಆರೋಗ್ಯವು ಸ್ಥಿರವಾಗಿರುತ್ತದೆ. ಈ ಹಿಂದೆ ಇದ್ದ ಆರೋಗ್ಯ ಸಮಸ್ಯೆಗಳು ನಿವಾರಣೆ ಆಗುತ್ತವೆ. ನಿಮ್ಮ ಸಹೋದ್ಯೋಗಿಗಳು ಮನಸಾರೆ ಹೊಗಳಲಿದ್ದಾರೆ. ವಾರದ ದ್ವಿತೀಯಾರ್ಧದಲ್ಲಿ ಆರ್ಥಿಕ ಸ್ಥಿತಿ ಉತ್ತಮವಾಗಿರುತ್ತದೆ. ಜೀವನಶೈಲಿಯಲ್ಲಿ ಸಕಾರಾತ್ಮಕವಾದ ಬದಲಾವಣೆ ಕಾಣಲಿದ್ದೀರಿ. ನೀವು ಹಾಕಿದ ಪ್ರಯತ್ನ ಫಲಿತಾಂಶ ನೀಡಲು ಆರಂಭಿಸುತ್ತದೆ. ಶುಭದಿನ 25. ಕಾಲಭೈರವನ ಸೇವೆ ಮಾಡಿರಿ.



**ಕುಂಭ**

ಸಾಹಿತ್ಯ ಮತ್ತು ಸಿನಿಮಾ ರಂಗದಲ್ಲಿ ಇರುವವರಿಗೆ ಅತ್ಯುತ್ತಮ ಫಲಿತಾಂಶ ದೊರೆಯಲಿದೆ. ಈ ವಾರ ಒಂದಿಲ್ಲೊಂದು ಕ್ರಿಯೇಟಿವ್ ಕೆಲಸದಲ್ಲಿ ತೊಡಗಿಕೊಳ್ಳಲಿದ್ದೀರಿ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ನಿಮ್ಮ ಜ್ಞಾನವನ್ನು ಹೆಚ್ಚು ಮಾಡಿಕೊಳ್ಳುವುದಕ್ಕೆ ಅಗತ್ಯವಾದ ಪ್ರಯತ್ನಗಳನ್ನು ಮಾಡಲಿದ್ದೀರಿ. ವೃತ್ತಿ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆ ಮಾಡಿಕೊಳ್ಳಲಿದ್ದೀರಿ. ಶುಭದಿನ 26. ವಿಷ್ಣು ಸಹಸ್ರನಾಮ ಓದಿರಿ.



**ಮೀನ**

ವಾರದ ಶುರುವಿನಿಂದಲೇ ಅಂದುಕೊಂಡ ಫಲಿತಾಂಶ ನಿಮಗೆ ದೊರೆಯಲಿದೆ. ದೂರದ ಸ್ಥಳದಿಂದ ಶುಭ ವಾರ್ತೆ ಕೇಳಲಿದ್ದೀರಿ. ಹಣಕಾಸು ಹೂಡಿಕೆಯಿಂದ ಉತ್ತಮ ಲಾಭವಾಗಲಿದೆ. ಕೆಲವು ಅನಾರೋಗ್ಯ ಸಮಸ್ಯೆಗಳು ಕಾಡಬಹುದು. ಋತುಮಾನಕ್ಕೆ ತಕ್ಕ ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ವಾರದ ದ್ವಿತೀಯಾರ್ಧದಲ್ಲಿ ಅದೃಷ್ಟದ ಬಲ ನಿಮಗಿರುತ್ತದೆ. ಶುಭದಿನ 20. ಶಿವಕವಚ ಪಠಿಸಿರಿ.